13

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 9-12-2020

# ಜೆಡಿಎಸ್ ಸಭಾಪತಿ ಬೇಡಿಕೆ

## ಕಾಂಗ್ರೆಸ್‌ಗೆ ಜೆಡಿಎಸ್ ಸದಸ್ಯರಿಂದ ಷರತ್ತು?

• ಶಂಕರ ಪಾಗೋಜಿ

ಬೆಂಗಳೂರು: 'ವಿಧಾನಪರಿಷತ್‌ನಲ್ಲಿ ಸಭಾಪತಿ ಸ್ಥಾನ ಕೊಟ್ಟವರಿಗೆ ನಮ್ಮ ಬೆಂಬಲ' ಎಂದು ಜೆಡಿಎಸ್ ದಾಳ ಉರುಳಿಸಿದ್ದು ಈ ಬಗ್ಗೆ ಕಾಂಗ್ರೆಸ್‌ಗೆ ಪರೋಕ್ಷ ಸುಳಿವು ನೀಡಿದೆ.

ಹಾಲಿ ಸಭಾಪತಿ ಕೆ.ಪ್ರತಾಪಚಂದ್ರ ಶೆಟ್ಟಿ ಅವರ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು ಬಿಜೆಪಿ ನೋಟಿಸ್ ನೀಡಿದ್ದು 14 ದಿನ ಮುಕ್ತಾಯವಾಗಿದೆ. ಈ ಬಗ್ಗೆ ಬಿಜೆಪಿ ಅವಿಶ್ವಾಸ ನಿರ್ಣಯ ಮಂಡನೆ ಮಾಡುವ ಬಗ್ಗೆ ಸಿದ್ಧತೆ ಮಾಡಿಕೊಂಡಿದೆ ಎನ್ನಲಾಗಿದ್ದು ಈ ನಡುವೆ ಕಾಂಗ್ರೆಸ್‌ನ ಕೆಲವು ವಿಧಾನ ಪರಿಷತ್ ಸದಸ್ಯರು ಈಗಿರುವ ವ್ಯವಸ್ಥೆಯನ್ನೇ ಮುಂದುವರಿಸಿಕೊಂಡು ಹೋಗಲು ಸಹಕರಿಸುವಂತೆ ಜೆಡಿಎಸ್ ಪರಿಷತ್ ಸದಸ್ಯರೊಂದಿಗೆ ಚರ್ಚೆ ನಡೆಸಿದ್ದಾರೆ ಎನ್ನಲಾಗಿದ್ದು, ಅದಕ್ಕೆ ಜೆಡಿಎಸ್ ಸದಸ್ಯರು ಸಭಾಪತಿ ಸ್ಥಾನದ ಷರತ್ತು ಹಾಕಿದ್ದಾರೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

ಬಿಜೆಪಿ ಸದಸ್ಯರು ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು ನೋಟಿಸ್ ನೀಡಿದ ಮೇಲೆ ಕಾಂಗ್ರೆಸ್ ಸದಸ್ಯರು ಜೆಡಿಎಸ್‌ನ ನಿಲುವು ಸ್ಪಷ್ಟಗೊಳ್ಳುವವರೆಗೂ ಸಭಾಪತಿ ಕೆ. ಪ್ರತಾಪ್‌ಚಂದ್ರ ಶೆಟ್ಟಿಗೆ ರಾಜೀನಾಮೆ ಸಲ್ಲಿಸದಂತೆ ಸೂಚನೆ ನೀಡಿದ್ದರು. ಅಲ್ಲದೇ ಒಂದು ವೇಳೆ, ಜೆಡಿಎಸ್ ಬಿಜೆಪಿ ಜೊತೆ ಕೈಜೋಡಿಸಿದರೆ ಆ ಪಕ್ಷದ ಜಾತ್ಯತೀತ ನಿಲುವು ಏನು ಎನ್ನುವುದು ಬಹಿರಂಗವಾಗುತ್ತದೆ ಎನ್ನುವ ಲೆಕ್ಕಾಚಾರದಲ್ಲಿಯೇ ಕಾಂಗ್ರೆಸ್ ನಾಯಕರು ಸಭಾಪತಿಗೆ ರಾಜೀನಾಮೆ ನೀಡದಂತೆ ಸೂಚಿಸಿದ್ದರು ಎಂದು ತಿಳಿದು ಬಂದಿದೆ.

ಬಿಜೆಪಿ ಸದಸ್ಯರು ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಅವರ ಇತ್ತೀಚಿನ ರಾಜಕೀಯ ನಡೆ ಆಧರಿಸಿ, ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆಗೆ ನೋಟಿಸ್ ನೀಡಿದೆ ಎನ್ನಲಾಗಿದೆ. ▶ 7ನೇ ಪುಟಕ್ಕೆ

> **ಸಭಾಪತಿಗಳು ಪಕ್ಷಪಾತದ ನಿರ್ಧಾರ ಕೈಗೊಂಡಿಲ್ಲ. ಅವರ ವಿರುದ್ಧ ಅವಿಶ್ವಾಸ ನಿರ್ಣಯ ಕೈಗೊಂಡಿದ್ದು ಸರಿಯಲ್ಲ. ಈ ಯತ್ನವನ್ನು ನಾವು ವಿರೋಧಿಸುತ್ತೇವೆ.**
>
> **• ಎಂ. ನಾರಾಯಣಸ್ವಾಮಿ,** ವಿಧಾನಪರಿಷತ್ ಪ್ರತಿಪಕ್ಷದ ಮುಖ್ಯ ಸಚೇತಕ

# ಜೆಡಿಎಸ್ ಸಭಾಪತಿ ಬೇಡಿಕೆ

**1ನೇ ಪುಟದಿಂದ ▶** ಆದರೆ, ಜೆಡಿಎಸ್‌ನ 14 ರಲ್ಲಿ 12 ಶಾಸಕರು ಬಸವರಾಜ್ ಹೊರಟ್ಟಿ ಅವರನ್ನು ಸಭಾಪತಿ ಮಾಡುವುದಾದರೆ ಬೆಂಬಲ ನೀಡುತ್ತೇವೆ ಎನ್ನುವ ಷರತ್ತು ಮುಂದಿಟ್ಟಿದ್ದಾರೆ ಎಂದು ಹೇಳಲಾಗುತ್ತಿದೆ.

ಜೆಡಿಎಸ್ ಸದಸ್ಯರ ಬೇಡಿಕೆ ಆಧಾರದಲ್ಲಿ ಕಾಂಗ್ರೆಸ್‌ನ ವಿಧಾನ ಪರಿಷತ್ ಸದಸ್ಯರೊಬ್ಬರು ಬಸವರಾಜ್ ಹೊರಟ್ಟಿ ಅವರನ್ನು ಸಭಾಪತಿ ಮಾಡುವ ತಮ್ಮ ಪಕ್ಷದ ನಾಯಕರ ಜೊತೆ ಚರ್ಚಿಸುವುದಾಗಿ ತಿಳಿಸಿದ್ದಾರೆ ಎಂದು ಹೇಳಲಾಗುತ್ತಿದೆ. ಆದರೆ, ಜೆಡಿಎಸ್ ನಾಯಕರ ಇತ್ತೀಚಿನ ಹೇಳಿಕೆಗಳ ಬಗ್ಗೆ ಬೇಸರಗೊಂಡಿರುವ ಕಾಂಗ್ರೆಸ್‌ನ ಒಂದು ಬಣ ಅವರೊಂದಿಗಿನ ಸಂಬಂಧವೇ ಬೇಡ ಎಂಬ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎನ್ನಲಾಗುತ್ತಿದೆ.

ಆದರೆ, ಭವಿಷ್ಯದಲ್ಲಿ ಮತ್ತೆ ಜೆಡಿಎಸ್ ಅನುಕೂಲಕ್ಕೆ ಬರುವ ಸಾಧ್ಯತೆ ಮತ್ತು ಪರಿಷತ್ತಿನಲ್ಲಿ ಸರ್ಕಾರದ ವಿರುದ್ಧ ಹೋರಾಟ ಮಾಡಲು ಅನುಕೂಲವಾಗುತ್ತದೆ ಎನ್ನುವ ಕಾರಣಕ್ಕೆ ಅವರೊಂದಿಗೆ ಪರಿಷತ್ತಿನಲ್ಲಿ ಸ್ನೇಹ ಸಂಬಂಧ ಮುಂದುವರೆಸಿಕೊಂಡು ಹೋಗಲು ಕಾಂಗ್ರೆಸ್‌ನ ಒಂದು ಬಣದ ನಾಯಕರು ಆಸಕ್ತಿ ಹೊಂದಿದ್ದಾರೆ ಎನ್ನಲಾಗುತ್ತಿದೆ.

**ವಿರೋಧಿಸಲು ಕಾಂಗ್ರೆಸ್ ನಿರ್ಧಾರ:** ಸಭಾಪತಿ ವಿರುದ್ಧ ಬಿಜೆಪಿ ಅವಿಶ್ವಾಸ ನಿರ್ಣಯಕ್ಕೆ ನೋಟಿಸ್ ನೀಡಿ 14 ದಿನ ಕಳೆದಿರುವುದರಿಂದ ಬಿಜೆಪಿ ಅವರ ವಿರುದ್ಧ ಅವಿಶ್ವಾಸ ಮಂಡನೆ ಅವಕಾಶ ಕೋರಿ ಸಭಾಪತಿಗೆ ಮನವಿ ಸಲ್ಲಿಸಬೇಕಾಗುತ್ತದೆ. ಒಂದು ವೇಳೆ, ಬಿಜೆಪಿ ಮನವಿ ಮಾಡಿದರೂ, ಅದನ್ನು ತಕ್ಷಣವೇ ನೀಡಬೇಕೆಂದೇನಿಲ್ಲ ಎನ್ನುವ ಕಾರಣಕ್ಕೆ ಈ ಅಧಿವೇಶನದಲ್ಲಿ ಸಭಾಪತಿ ಬದಲಾವಣೆಗೆ ಅವಕಾಶ ನೀಡದಿರಲು ಕಾಂಗ್ರೆಸ್ ಕಾರ್ಯತಂತ್ರ ರೂಪಿಸುತ್ತಿದೆ ಎಂದು ತಿಳಿದು ಬಂದಿದೆ. ಗ್ರಾ.ಪಂ. ಚುನಾವಣೆ ಹಿನ್ನೆಲೆ ಯಲ್ಲಿ ವಿಧಾನಸಭೆ ಕಲಾಪವನ್ನು ಗುರುವಾರಕ್ಕೆ ಮುಕ್ತಾಯಗೊಳಿಸಲು ನಿರ್ಧರಿಸಿರುವುದರಿಂದ ಪರಿಷತ್ ಕಲಾಪವನ್ನೂ ಗುರುವಾರಕ್ಕೆ ಅಂತ್ಯಗೊಳಿಸಲು ಬುಧವಾರ ನಡೆಯುವ ಸದನ ಸಲಹಾ ಸಮಿತಿ ಸಭೆಯಲ್ಲಿ ಕಾಂಗ್ರೆಸ್ ಸದಸ್ಯರು ಆಗ್ರಹಿಸಲು ನಿರ್ಧರಿಸಿದ್ದಾರೆ. ಬಿಜೆಪಿ ಸದನವನ್ನು ಶುಕ್ರವಾರದ ವರೆಗೂ ಮುಂದೂಡಿ ಸಭಾಪತಿಯನ್ನು ಪದಚ್ಯುತಗೊಳಿಸಲು ಆಗ್ರಹಿಸಲು ಮುಂದಾಗಿದ್ದಾರೆ ಎಂದು ತಿಳಿದು ಬಂದಿದೆ.